ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
( ಕಂದಾಯ ಇಲಾಖೆ )

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/37

ದಿನಾಂಕ: 07-09-2021

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ.

ವಿಷಯ : ಕೋವಿಡ್-19 ಹಿನ್ನಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಶ್ರೀ ಕ್ಷೇತ್ರ ಧರ್ಮಸ್ಥಳ ಮತ್ತು ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಗಳಿಗೆ ವಿಧಿಸಿರುವ ನಿರ್ಬಂಧಗಳನ್ನು ಮುಂದುವರಿಸುವ ಕುರಿತು.

ಉಲ್ಲೇಖ : 1) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/27 ; ದಿನಾಂಕ: 04-08-2021.

2) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/31 ; ದಿನಾಂಕ: 14-08-2021.

3) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/35 ; ದಿನಾಂಕ: 31-08-2021

4) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/36 ; ದಿನಾಂಕ: 07-09-2021

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕಾಲಕಾಲಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುತ್ತಿದೆ ಹಾಗೂ ಜಿಲ್ಲೆಯಾದ್ಯಂತ ಉಲ್ಲೇಖ (3) ರಂತೆ ಕೋವಿಡ್ ಮಾರ್ಗಸೂಚಿಗಳನ್ನು ಜಾರಿಗೊಳಿಸಿ ಆದೇಶಿಸಲಾಗಿರುತ್ತದೆ.

ಮುಂದುವರಿದು, ದಕ್ಷಿಣ ಕನ್ನಡ ಜಿಲ್ಲೆಯ ಪ್ರತಿಷ್ಠಿತ ದೇವಸ್ಥಾನಗಳಿಗೆ ಸಂಬಂಧಿಸಿದಂತೆ ಈಗಾಗಲೇ ಉಲ್ಲೇಖ (4) ರಂತೆ ನಿರ್ಬಂಧ / ಮಾರ್ಗಸೂಚಿಗಳನ್ನು ವಿಧಿಸಿರುವ ಆದೇಶವನ್ನು ಹಿಂಪಡೆದು ಈ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

1. *ಶ್ರೀ ಕ್ಷೇತ್ರ ಧರ್ಮಸ್ಥಳ ಮತ್ತು ಶ್ರೀ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಗಳು ಭಕ್ತಾದಿಗಳಿಗೆ ಬೆಳಿಗ್ಗೆ 7-00 ರಿಂದ ಸಂಜೆ 7-00 ಗಂಟೆಯವರೆಗೆ ಮಾತ್ರ ತೆರೆದಿರುತ್ತದೆ. ಈ ಸಂದರ್ಭದಲ್ಲಿ ಕಡ್ಡಾಯವಾಗಿ ಸಾಮಾಜಿಕ ಅಂತರ, ಅಗತ್ಯ ಕೋವಿಡ್ ನಿಯಂತ್ರಣ ಮುಂಜಾಗೃತಾ ಕ್ರಮಗಳನ್ನು ಕೈಗೊಂಡು ಭಕ್ತಾದಿಗಳಿಗೆ ದೇವರ ದರ್ಶನ, ತೀರ್ಥಪ್ರಸಾದ, ಅನ್ನಸಂತರ್ಪಣೆಗೆ ಮುಂದಿನ ಆದೇಶದವರೆಗೆ ಅವಕಾಶ ನೀಡಲಾಗಿದ್ದು, ಯಾವುದೇ ಸೇವೆಗಳಿಗೆ ಅವಕಾಶವಿರುವುದಿಲ್ಲ.*

2. ವಾರಾಂತ್ಯದಲ್ಲಿ (ಶನಿವಾರ ಮತ್ತು ಭಾನುವಾರ) ಭಕ್ತಾದಿಗಳ ಪ್ರವೇಶವನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ ಹಾಗೂ ವಸತಿ ಗೃಹಗಳಲ್ಲಿ ತಂಗುವುದಾಗಲೀ ಅಥವಾ ದೇವರ ದರ್ಶನಕ್ಕೆ ಅವಕಾಶವಿರುವುದಿಲ್ಲ.
3. ಶನಿವಾರ ಮತ್ತು ಭಾನುವಾರಗಳಂದು ಎಲ್ಲಾ ರೀತ್ಯಾ ಉತ್ಸವ / ಸೇವೆಗಳು, ತೀರ್ಥ, ಪ್ರಸಾದ, ಮುಡಿ ಸೇವೆ ವಸತಿಗಳನ್ನು ನಿರ್ಬಂಧಿಸಿ, ಅರ್ಚಕರುಗಳಿಂದ ಸಾಂಪ್ರದಾಯಿಕ ಪೂಜೆಗೆ ಮಾತ್ರ ಅವಕಾಶ ಕಲ್ಪಿಸಿದೆ.
4. ಜಾತ್ರೆಗಳು, ದೇವಾಲಯದ ಉತ್ಸವಗಳು, ಮೆರವಣಿಗೆಗಳು ಇತ್ಯಾದಿಗಳನ್ನು ನಿಷೇಧಿಸಿದೆ.

ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 4, 5 ಮತ್ತು 10 ರಂತೆ ಕ್ರಮ ಜರಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 07-09-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರ್ಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ.,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

1. ಪೊಲೀಸ್ ಆಯುಕ್ತರು, ಮಂಗಳೂರು ನಗರ - ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
6. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.
7. ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರು / ಪುತ್ತೂರು / ಬಂಟ್ವಾಳ.
8. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ. ಮಂಗಳೂರು / ಪುತ್ತೂರು.
9. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
11. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.
12. ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳಿಗೆ.
13. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ.
14. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.